# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 669 |
| ಮಾನ್ಯ ಸದಸ್ಯರ ಹೆಸರು: | ಶ್ರೀ ಸಿ.ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ: | 09.03.2026 |
| ಉತ್ತರಿಸುವ ಸಚಿವರು: | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹನೂರು ತಾಲ್ಲೂಕಿನ ಮಲೆ ಮಹದೇಶ್ವರ ಬೆಟ್ಟದ ವ್ಯಾಪ್ತಿಯ ಕಾಡಂಚಿನ ಗ್ರಾಮಗಳಲ್ಲಿ ತುರ್ತು ಚಿಕಿತ್ಸೆಗಾಗಿ ಅಂಬ್ಯುಲೆನ್ಸ್ ಸೌಲಭ್ಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮಲೆ ಮಹದೇಶ್ವರ ಬೆಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 2 ಅಂಬ್ಯುಲೆನ್ಸ್ ಗಳು ಲಭ್ಯವಿದ್ದು, ಒಂದು ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಹಾಗೂ ಒಂದು ಅಂಬ್ಯುಲೆನ್ಸ್ ಪ್ರಾಧಿಕಾರದ ವತಿಯಿಂದ ಸೇವೆ ನೀಡಲಾಗುತ್ತಿದೆ. |
| ಆ) | ದಿನಾಂಕ: 14.02.2026 ರಂದು ಒಬ್ಬ ಮಹಿಳೆಯನ್ನು ಅಂಬ್ಯುಲೆನ್ಸ್ ಸಿಗದೆ ಡೋಲಿಯಲ್ಲಿ ಹೊತ್ತು ತಂದಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ವೈಫಲ್ಯ ಎಸಗಿದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ದಿನಾಂಕ: 14.02.2026 ರಂದು, ಮಲೆ ಮಹದೇಶ್ವರ ಬೆಟ್ಟದಿಂದ ಸುಮಾರು 3 ಕಿ.ಮೀ ದೂರದಲ್ಲಿರುವ ಕಾಡುಹೊಲ ಎಂಬಲ್ಲಿ ರೋಗಿಯು ವಾಸವಾಗಿದ್ದು, ಸದರಿ ಪ್ರದೇಶವು ಗುಡ್ಡಗಾಡು ಮತ್ತು ಕಾಡಿನ ಪ್ರದೇಶವಾಗಿರುತ್ತದೆ. ಇಲ್ಲಿಗೆ ರಸ್ತೆ ಸಂಪರ್ಕ ಇರುವುದಿಲ್ಲ. ಸದರಿ ಸ್ಥಳದಲ್ಲಿದ್ದ ಜನರು ಅಂಬ್ಯುಲೆನ್ಸ್‌ಗೆ ಕರೆ ಮಾಡಿದ್ದು, ರಸ್ತೆ ಸಂಪರ್ಕ ಇರುವ ಪ್ರದೇಶದವರೆಗೆ ಅಂಬ್ಯುಲೆನ್ಸ್ ತಲುಪಿಸಲಾಗಿದೆ. ಅಂಬ್ಯುಲೆನ್ಸ್ ಅಲ್ಲಿಗೆ ತಲುಪುವ ಮೊದಲು ರೋಗಿಯ ಸಂಬಂಧಿಕರು ರೋಗಿಯನ್ನು ಮೆಟ್ಟೂರು ಆಸ್ಪತ್ರೆಗೆ (ತಮಿಳುನಾಡು) ಕರೆದೊಯ್ದಿರುತ್ತಾರೆ. ರೋಗಿಯನ್ನು ಪ್ರಾಥಮಿಕ ಆರೋಗ್ಯ ಕೇಂದ್ರ ಮಲೆ ಮಹದೇಶ್ವರ ಬೆಟ್ಟ ಇಲ್ಲಿಗೆ ಕರೆತಂದಿರುವುದಿಲ್ಲ. |
| ಇ) | ಮಲೆ ಮಹದೇಶ್ವರ ಬೆಟ್ಟದ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಅಭಿವೃದ್ಧಿ ಪ್ರಾಧಿಕಾರಕ್ಕೆ ನೀಡಲಾಗಿರುವ ಅಂಬ್ಯುಲೆನ್ಸ್ ಗಳು ಪ್ರಸ್ತುತ ಸುಸ್ಥಿತಿಯಲ್ಲಿವೆಯೇ; ಇಲ್ಲದಿದ್ದಲ್ಲಿ ಅವುಗಳ ದುರಸ್ತಿಗೆ ಅಥವಾ ಹೊಸ ಅಂಬ್ಯುಲೆನ್ಸ್ ಒದಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಹೌದು, ಮಲೆ ಮಹದೇಶ್ವರ ಬೆಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರವು 2 ಅಂಬ್ಯುಲೆನ್ಸ್ ಗಳನ್ನು ಹೊಂದಿದ್ದು, ಪ್ರಸ್ತುತ ಎರಡೂ ಅಂಬ್ಯುಲೆನ್ಸ್‌ಗಳು ಸುಸ್ಥಿತಿಯಲ್ಲಿ ಕಾರ್ಯನಿರ್ವಹಿಸುತ್ತಿವೆ. |
| ಈ) | ಬೆಟ್ಟದ ಪ್ರಾಧಿಕಾರಕ್ಕೆ ಕೋಟ್ಯಂತರ ರೂಪಾಯಿ ಆದಾಯವಿದ್ದರೂ ಸಮೀಪದ ಗ್ರಾಮಗಳಿಗೆ ರಸ್ತೆ, ಸಾರಿಗೆ ಮತ್ತು ಆರೋಗ್ಯದಂತಹ ಕನಿಷ್ಠ | ಮಹದೇಶ್ವರ ಬೆಟ್ಟದಿಂದ ಕಾಡಂಚಿನ ಗ್ರಾಮದ, ಗ್ರಾಮಸ್ಥರುಗಳ ಅನುಕೂಲಕ್ಕಾಗಿ ಜನ-ವನ ಸೇತುವೆ ಯೋಜನೆಯಡಿಯಲ್ಲಿ ಅರಣ್ಯ ಇಲಾಖೆಯಿಂದ ನಿರ್ವಹಿಸಲಾಗುತ್ತಿದ್ದ 4 ವೀಲ್‌ನ ಫೋರ್ಸ್ ಮೋಟಾರ್ ಲಿಮಿಟೆಡ್‌ನ 3 ಗೂರ್ಖಾ ವಾಹನಗಳನ್ನು ಪ್ರಾಧಿಕಾರದಿಂದ ನಿರ್ವಹಿಸಲು ಹಸ್ತಾಂತರಿಸಲಾಗಿದ್ದು, ಸದರಿ ವಾಹನಗಳು ಸಂಚರಿಸಲು ರಸ್ತೆ ಇರುವಂತಹ ಕಾಡಂಚಿನ ಗ್ರಾಮಗಳಲ್ಲಿನ ಗ್ರಾಮಸ್ಥರುಗಳು ಮತ್ತು ವಿದ್ಯಾರ್ಥಿಗಳ ಪ್ರಯಾಣದ ಉಪಯೋಗಕ್ಕೆ ಬಳಕೆ ಮಾಡಲಾಗುತ್ತಿದೆ. |

| | | |
|---|---|---|
| | ಸೌಲಭ್ಯಗಳನ್ನು ಒದಗಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು: | ಮುಂದುವರೆದು, ಬೆಟ್ಟದ ಪ್ರಾಧಿಕಾರಕ್ಕೆ ಸ್ವೀಕೃತವಾಗುವ ಆದಾಯದಲ್ಲಿ ದೇವಾಲಯಕ್ಕೆ ಆಗಮಿಸುವ ಭಕ್ತಾದಿಗಳಿಗೆ ಅಗತ್ಯ ಮೂಲಭೂತ ಸೌಲಭ್ಯ ಕಲ್ಪಿಸಲು, ದೇವಾಲಯದ ವಿವಿಧ ಅಭಿವೃದ್ಧಿ ಕಾಮಗಾರಿಗಳು, ನೌಕರರುಗಳ ವೇತನ ಭತ್ಯೆಗಳಿಗೆ ಸಂಬಂಧಿಸಿದಂತೆ ವೆಚ್ಚ ಮಾಡಲು ಮಾತ್ರ ನಿಯಮಗಳಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದು ಕಂದಾಯ ಇಲಾಖೆಯು ಮಾಹಿತಿ ನೀಡಿದೆ. |
| ಉ) | ಕಾಡಂಚಿನ ಗ್ರಾಮಗಳ ಜನರಿಗೆ ಪ್ರಾಣಿಗಳಂತೆ ಬದುಕುವ ಪರಿಸ್ಥಿತಿಯನ್ನು ತಪ್ಪಿಸಲು ಮತ್ತು ಶಾಶ್ವತವಾಗಿ ಸುಸಜ್ಜಿತ ಸಂಚಾರಿ ಆರೋಗ್ಯ ಘಟಕಗಳನ್ನು (Mobile Health Units) ಪ್ರಾರಂಭಿಸುವ ಉದ್ದೇಶ ಸರ್ಕಾರದ ಮುಂದಿದೆಯೆ? | ಆರೋಗ್ಯ ಸೇತು ಕಾರ್ಯಕ್ರಮದಡಿಯಲ್ಲಿ 4 ತುರ್ತು ವಾಹನಗಳಿಂದ ಕಾಡಂಚಿನ ಗ್ರಾಮಗಳ ಜನರಿಗೆ ಆರೋಗ್ಯ ಸೇವೆ ಒದಗಿಸಲಾಗುತ್ತಿದೆ. ಇದರಲ್ಲಿ 2 ತುರ್ತು ವಾಹನಗಳು ಹನೂರು ಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿವೆ. |

ಆಕುಕ 25 ಎಸ್‌ಬಿವಿ 2026

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು